**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ.** 2459/**2025**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಅಕ್ಬರ್ | ಸಿ.ಡಬ್ಲ್ಯೂ-05 |
| ತಂದೆಯ ಹೆಸರು | : | ಬಷೀರ್ ಸಾಬ್ | ಪಿ.ಡಬ್ಲ್ಯೂ-03 |
| ವಯಸ್ಸು | : | 25 ವರ್ಷ | |
| ಉದ್ಯೋಗ | : | ಟೈಲರ್ ಕೆಲಸ | |
| ವಾಸಸ್ಥಳ | : | ಬುಡ್ನಹಟ್ಟಿ | ದಿಃ 07-02-2026. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಸಾಕ್ಷಿಗೆ ನಿಪಿ.5 ಅನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿಃ 5(ಬಿ) ಅಂತ ಗುರುತಿಸಲಾಯಿತು. ದಿನಾಂಕ 05.10.2025 ರಂದು ಠಾಣೆಯಲ್ಲಿ ನಿಪಿ.5 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ.5 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-5 ಕ್ಕೆ ಸಹಿ ಮಾಡುವಾಗ ಪೊಲೀಸರು ಮತ್ತು ಚಾಸಾ-4 ರವರು ಹಾಜರಿದ್ದರು. ಪೊಲೀಸರು ನನ್ನನ್ನು ಎಲ್ಲಿಯೂ ಕರೆದುಕೊಂಡು ಹೋಗಿರುವುದಿಲ್ಲ.

ಸಾಕ್ಷಿಗೆ ನಿಪಿ.6 ಅನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿಃ 6(ಬಿ) ಅಂತ ಗುರುತಿಸಲಾಯಿತು.

ದಿನಾಂಕ 08.10.2025 ರಂದು ಪೊಲೀಸ್ ಠಾಣೆಯಲ್ಲಿ ನಿಪಿ.6 ಕ್ಕೆ ಸಹಿ ಮಾಡಿರುತ್ತೇನೆ. ಆ ಸಮಯದಲ್ಲಿ ನನ್ನ ಜೊತೆ ಚಾಸಾ-4, ಪೊಲೀಸರು ಹಾಗೂ ಆರೋಪಿ ಇದ್ದರು. ಪೊಲೀಸರು ನನ್ನ ಸಮಕ್ಷಮ 04-00 ರಿಂದ 04-30 ರವರೆಗೆ ಮಹಜರ್ ಕ್ರಮ ಜರುಗಿಸಿ ಕಳ್ಳತನವಾಗಿದ್ದ ಬೈಕನ್ನು ಜಪ್ತು ಪಡಿಸಿಕೊಂಡಿರುತ್ತಾರೆ. ಮಹಜರ್ ಸಮಯದಲ್ಲಿ ನಿಪಿ.4 ರ ಭಾವಚಿತ್ರ ತೆಗೆಯಲಾಗಿರುತ್ತದೆ.

**( ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ದಿನಾಂಕ 05.10.2025 ರಂದು ಆರೋಪಿಯು ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣದ ಪಕ್ಕ ಕಳ್ಳತನ ಮಾಡಿದ ಜಾಗವನ್ನು ತೋರಿಸಿದ ಮೇರೆಗೆ ನಿಪಿ.5 ರಂತೆ ಮದ್ಯಾಹ್ನ 03-45 ರಿಂದ 04-10 ರವರೆಗೆ ಮಹಜರ್ ಕ್ರಮ ಜರುಗಿಸಿ ನನ್ನ ಸಹಿಯನ್ನು ಸ್ಥಳದಲ್ಲಿ ಪಡೆದಿರುತ್ತಾರೆ ಎಂದರೆ ಸರಿ.

ದಿನಾಂಕ 07.10.2025 ರಂದು ನಿಪಿ.6 ರಂತೆ ಮಹಜರ್ ಕ್ರಮ ಜರುಗಿಸಿ ಕೆಎ-16 ಇಎ-5480 ವಾಹನವನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿ. ಆಗ ಸಮಯ ಮದ್ಯಾಹ್ನ 03-00 ರಿಂದ 03-20 ಆಗಿತ್ತು ಎಂದರೆ ಸರಿ. ಸದರಿ ಬೈಕನ್ನು ಚಾಸಾ-6 ರವರಿಗೆ ಆರೋಪಿಯು ಮಾರಾಟ ಮಾಡಿದ್ದು, ಚಾಸಾ-6 ರವರು ಠಾಣೆಗೆ ತಂದು ಹಾಜರು ಪಡಿಸಿದರು ಎಂದರೆ ಸರಿ. ಆಗ ಚಾಸಾ-6 ರವರು ಆರೋಪಿಯಿಂದ ಬೈಕನ್ನು ಖರೀದಿಸಿದ್ದೆ ಎಂದು ಹೇಳಿದರು ಎಂದರೆ ಸರಿ. ನ್ಯಾಯಾಲಯದ ಮುಂದೆ ಇರುವ ಆರೋಪಿಯೇ ಮಹಜರ್ ಸಮಯದಲ್ಲಿ ಸ್ಥಳ ತೋರಿಸಿದ್ದರು ಎಂದರೆ ಸರಿ.

**ಪಾಟೀ ಸವಾಲುಃ ಶ್ರೀಮತಿ ಬಿ ಜಿ. . ಆರೋಪಿ ಪರ ವಕೀಲರಿಂದಃ**

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿ. ಅಮಾನತ್ತು ಪಂಚನಾಮೆಗೆ ಹಾಜರಾಗಲು ನನಗೆ ನೋಟೀಸ್ ಜಾರಿ ಮಾಡಿರುವುದಿಲ್ಲ ಎಂದರೆ ಸರಿ. ವಾಸವಿ ಕಾಲೇಜಿನ ಹತ್ತಿರ ಯಾವ ಬೈಕ್ ಕಳ್ಳತನವಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನಾನು ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣದ ಹತ್ತಿರ ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಜಪ್ತು ಪಡಿಸಿಕೊಂಡ ವಾಹನ ಯಾವ ಕಂಪನಿಯದ್ದು ಎಂದು ನನಗೆ ಗೊತ್ತಿಲ್ಲ. ಸದರಿ ವಾಹನದ ನೊಂದಣಿ ಸಂಖ್ಯೆ ಹೇಳಲು ಆಗುವುದಿಲ್ಲ. ಠಾಣೆಯಲ್ಲಿ ಯಾರು ಬೈಕನ್ನು ತಂದು ಹಾಜರು ಪಡಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನಾನು ಠಾಣೆಗೆ ಬರುವಷ್ಟರಲ್ಲಿ ಬೈಕನ್ನು ನಿಲ್ಲಿಸಲಾಗಿತ್ತು ಎಂದರೆ ಸರಿ.ಬೈಕನ್ನು ಯಾರಿಗೆ ಮಾರಾಟ ಮಾಡಲಾಗಿತ್ತು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನಿಪಿ.5 ಮತ್ತು 6 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸರು ಸಹಿ ಮಾಡಲು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಪೊಲೀಸರ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪಧಾನ ಸಿವಿಲ್ ಮತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ